ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಮುಖ್ಯಮಂತ್ರಿಯವರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 25/07/202

### ಮುಲಾಜಿಲ್ಲದೆ ಕ್ರಮಕ್ಕೆ ಸೂಚನೆ । ನೀರು, ವಿದ್ಯುತ್ ಸೌಲಭ್ಯ ಕಟ್

# ಖಾಸಗಿ ಆಸ್ಪತ್ರೆಗಳ ವಿರುದ್ಧ ಕಿಡಿ

25/7/20

**ಸಂ.ಕ.ಸಮಾಚಾರ ಬೆಂಗಳೂರು**

ಕೊರೊನಾ ಸೋಂಕಿತರನ್ನು ಆಸ್ಪತ್ರೆಗೆ ದಾಖಲಿಸಿಕೊಳ್ಳಲು ನಿರಾಕರಿಸುವ ಖಾಸಗಿ ಆಸ್ಪತ್ರೆಗಳ ವಿರುದ್ಧ ಮುಲಾಜಿಲ್ಲದೇ ಕ್ರಮ ತೆಗೆದುಕೊಳ್ಳಿ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಗೃಹಕಚೇರಿ ಕೃಷ್ಣಾದಲ್ಲಿ ನಡೆದ ದಕ್ಷಿಣ ವಲಯದ ಉಸ್ತುವಾರಿ, ಅಧಿಕಾರಿಗಳ ಸಭೆಯಲ್ಲಿ ಸೋಂಕಿನ ಸ್ಥಿತಿಗತಿಗಳನ್ನು ಅವಲೋಕಿಸಿ ಮಾತನಾಡಿದ ಅವರು, ಒಪ್ಪಂದದಂತೆ ಖಾಸಗಿ ಆಸ್ಪತ್ರೆಯವರು ಸರ್ಕಾರಕ್ಕೆ ಈವರೆಗೂ ಕೊಟ್ಟ ಭರವಸೆಯಂತೆ ಹಾಸಿಗೆಗಳನ್ನು ನೀಡದೆ ನಮ್ಮ ಆದೇಶಕ್ಕೆ ಕವಡೆ ಕಾಸಿನ ಕಿಮ್ಮತ್ತು ನೀಡುತ್ತಿಲ್ಲ. ಒಂದು ಹಂತದವರೆಗೂ ಸಹಿಸಿಕೊಳ್ಳಬಹುದು. ಖಾಸಗಿ ಆಸ್ಪತ್ರೆಗಳ ವರ್ತನೆಸಹಿಸಲು ಆಗುವುದಿಲ್ಲ ಕೂಡಲೇ ಕಾನೂನು ಕ್ರಮ ಜರುಗಿಸಿ ಎಂದು ಹೇಳಿದರು.



ವೈದ್ಯಕೀಯ ಕಾಲೇಜುಗಳ ಮಾಲೀಕರು ಹಾಗೂ ಖಾಸಗಿ ಆಸ್ಪತ್ರೆಗಳ ಜೊತೆ ನಾಲ್ಕು ಸುತ್ತು ಸಭೆ ನಡೆಸಲಾಗಿದೆ. ಪ್ರತಿಯೊಂದು ಸಭೆಯಲ್ಲೂ ಸರ್ಕಾರಕ್ಕೆ ಎಲ್ಲಾ ರೀತಿಯ ಸಹಕಾರ ಕೊಡುತ್ತೇವೆ ಎಂದು ಹೇಳುತ್ತಾರೆ. ಅದರೆ ಈವರೆಗೂ ಏಕೆ ಹಾಸಿಗೆಗಳನ್ನು ಕೊಡುತ್ತಿಲ್ಲ ಎಂದು ಅಧಿಕಾರಿಗಳನ್ನು ಪ್ರಶ್ನಿಸಿದರು. ಎಷ್ಟೇ ಪ್ರಭಾವಿಗಳಾಗಿರಲಿ, ಯಾರೇ ಇರಲಿ ನೀವು ತಲೆಕೆಡಿಸಿಕೊಳ್ಳಬೇಡಿ. ಕೊನೆಯ ಸಭೆಯಲ್ಲಿ ಅವರಿಗೆ ಹಾಸಿಗೆಗಳನ್ನು ನೀಡದಿದ್ದರೆ ಕಾನೂನು ಕ್ರಮ ಜರುಗಿಸುವುದಾಗಿ ಎಚ್ಚರಿಕೆ ಕೊಟ್ಟಿದ್ದೆವು. ಇಷ್ಟಾದರೂ ಸರ್ಕಾರದ ಆದೇಶವನ್ನು ಪಾಲನೆ ಮಾಡದಿದ್ದರೆ ನಾವು ಕೈಕಟ್ಟಿ ಕೂರಬೇಕೆ? ನೀವು ಅವರ ಮೇಲೆ ಕ್ರಮ ಜರುಗಿಸುತ್ತಿಲ್ಲ ಯಾಕೆ ಎಂದು ಅಧಿಕಾರಿಗಳಿಗೆ ಚಳಿ ಬಿಡಿಸಿದರು.ಇನ್ನು ಕಾರಣಗಳನ್ನು ಹೇಳಬೇಡಿ. ಯಾವ ಆಸ್ಪತ್ರೆಗಳು ಹಾಸಿಗೆಗಳನ್ನು ಕೊಡುವುದಿಲ್ಲ ಎಂದು ಹೇಳುತ್ತಾರೋ ಅಂತಹ ಆಸ್ಪತ್ರೆಗಳಿಗೆ ಮೂಲಭೂತ ಸೌಕರ್ಯಗಳನ್ನು ತಕ್ಷಣವೇ ನಿಲ್ಲಿಸಿ.

> “ಬೆಡ್ ನೀಡದೇ ಸರ್ಕಾರದ ಸೂಚನೆಗಳನ್ನು ಧಿಕ್ಕರಿಸಿದ ದಕ್ಷಿಣ ವಲಯದ ಎಂಟು ಆಸ್ಪತ್ರೆಗಳ ಪರವಾನಗಿ ರದ್ದುಮಾಡುವ ಕುರಿತು ಶನಿವಾರ ನೋಟಿಸ್ ನೀಡಲಾಗುವುದು. ಅದಾದ ನಂತರ ಮೂರು ದಿನಗಳಲ್ಲಿ ಆಸ್ಪತ್ರೆಗಳನ್ನು ಮುಚ್ಚಲು ಕ್ರಮ ತೆಗೆದುಕೊಳ್ಳಲಾಗುತ್ತದೆ. ಮನೆಗೆ ಮಾಸ್ಕ್, ಸ್ಯಾನಿಟೈಸರ್, ಥರ್ಮಾಮೀಟರ್ ಸೇರಿದಂತೆ ಎಲ್ಲಾ ಅಗತ್ಯ ವೈದ್ಯಕೀಯ ಪರಿಕರ ಇರುವ ಮೆಡಿಕಲ್ ಕಿಟ್ ಕೊಡಲು ಬಿಬಿಎಂಪಿ ಆಯುಕ್ತರಿಗೆ ಸೂಚಿಸಿದ್ದೇವೆ. ಶಾಂತಿನಗರದಲ್ಲಿ ಮನೆಗೆ ಶೀಟ್ ಬಳಸಿ ಸೀಲ್ ಮಾಡಿರುವ ಕ್ರಮ ಸರಿಯಲ್ಲ. ತಪ್ಪಿದ್ದರೆ ಕಠಿಣ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಲಾಗಿದೆ..
>
> ■ **ಆರ್.ಅಶೋಕ್** । ಸಚಿವ

- **ಯಾರೇ ಇರಲಿ ತಲೆಕೆಡಿಸಿಕೊಳ್ಳಬೇಡಿ**
- **ಅಧಿಕಾರಿಗಳಿಗೆ ಚಳಿ ಬಿಡಿಸಿದ ಸಿಎಂ**
- **ಕಾನೂನು ಕ್ರಮ ಜರುಗಿಸಬಹುದು**

ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆಯಡಿ ಸರ್ಕಾರಕ್ಕೆ ಸಹಕಾರ ನೀಡದ ಯಾವುದೇ ಸಂಸ್ಥೆಗಳ ಮೇಲೂ ಕ್ರಮ ಜರುಗಿಸಲು ಕಾನೂನಿನಲ್ಲಿ ಅವಕಾಶವಿದೆ. ಈಗ ಆಸ್ಪತ್ರೆಗಳಿಗೆ ವಿದ್ಯುತ್, ನೀರು ಸೇರಿದಂತೆ ಕನಿಷ್ಠ ಮೂಲ ಸೌಕರ್ಯಗಳನ್ನು ಬಂದ್ ಮಾಡಲೇಬೇಕಾಗುತ್ತದೆ.

ಅಷ್ಟಕ್ಕೂ ಬಗ್ಗದಿದ್ದರೆ ಆಯಾ ವಲಯಗಳಲ್ಲಿ ಬಿಬಿಎಂಪಿ ಆಯುಕ್ತರು, ಜಿಲ್ಲಾಧಿಕಾರಿಗಳು ತಮ್ಮಗಿರುವ ಅಧಿಕಾರವನ್ನು ಚಲಾಯಿಸುವಂತೆ ಸೂಚನೆ ಕೊಟ್ಟರು. ಶನಿವಾರದಿಂದ ಎ ಸಿಂಪ್ಟಮ್ಸ್ ಸೋಂಕಿತರನ್ನು ಬಿಐಇಎಸ್‌ನಲ್ಲಿ ನಿರ್ಮಾಣವಾಗಿರುವ ಕೊರೊನಾ ಕೇರ್ ಸೆಂಟರ್‌ಗೆ ಸೇರಿಸವಂತೆ ಸೂಚಿಸಿದರು. ದಕ್ಷಿಣ ವಲಯದ ಉಸ್ತುವಾರಿ, ಕಂದಾಯ ಸಚಿವ ಆರ್. ಅಶೋಕ್, ಸಂಸದ ತೇಜಸ್ವಿಸೂರ್ಯ ಮತ್ತಿತರರಿದ್ದರು.